CE (Dasarahalli)
pl. put up in multiples
9/1/19

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬಿಬಿಎಂಪಿ ಹಾಗೂ ಅರಸೀಕೆರೆ ನಗರಸಭೆ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಎಸ್‌ಎಫ್‌ಸಿ ವಿಶೇಷ ಅನುದಾನ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ:-1) ಆಯುಕ್ತರು, ಬಿಬಿಎಂಪಿ ರವರ ಪತ್ರ ಸಂಖ್ಯೆ:ಆಆಕಾ/ಪಿಎಸ್‌ಆರ್/ (4) /7656/2018-19, ದಿನಾಂಕ:14-11-2018.

2) ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ:ಆಇ 780 ವೆಚ್ಚ-9/2018, ದಿನಾಂಕ:17-12-2018.

3) ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ:ಆಇ 1321 ವೆಚ್ಚ-12/18, ದಿನಾಂಕ:05-01-2019.

*****

ಪ್ರಸ್ತಾವನೆ:

ಬಿಬಿಎಂಪಿ ವ್ಯಾಪ್ತಿಯ ದಾಸರಹಳ್ಳಿ ಮತ್ತು ಮಹಾಲಕ್ಷ್ಮೀ ಲೇಔಟ್ ವಿಧಾನಸಭಾ ಕ್ಷೇತ್ರಗಳು ಮತ್ತು ಅರಸೀಕೆರೆ ಪುರಸಭೆ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಒಟ್ಟು ರೂ.60.00ಕೋಟಿಗಳನ್ನು ಎಸ್‌ಎಫ್‌ಸಿ ಯೋಜನೆಯಡಿ ಬಿಡುಗಡೆ ಮಾಡಲು ಮೇಲೆ ಓದಲಾದ (2)ರ ಹಿಂಬರಹದಲ್ಲಿ ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.

ಮುಂದುವರೆದು, ಮಂಜೂರು ಮಾಡಿರುವ ರೂ.60.00ಕೋಟಿಗಳಲ್ಲಿ ಕೈಗೊಳ್ಳುವ ಕಾಮಗಾರಿಗಳನ್ನು ಕೆ.ಆರ್.ಐ.ಡಿ.ಎಲ್ ಮೂಲಕ ಕೈಗೊಳ್ಳಲು ಕೆಟಿಪಿಪಿ ಅಧಿನಿಯಮ-1999 ರಿಂದ ಕಲಂ. 4(ಜಿ)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಆರ್ಥಿಕ ಇಲಾಖೆಯು ಮೇಲೆ ಓದಲಾದ (3)ರ ಅಧಿಸೂಚನೆಯಲ್ಲಿ ವಿನಾಯ್ತಿ ನೀಡಿರುತ್ತದೆ.

ಆದ್ದರಿಂದ, ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ:ನಅಇ 225 ಎಸ್‌ಎಫ್‌ಸಿ 2018,
ಬೆಂಗಳೂರು, ದಿನಾಂಕ: 07-01-2019.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯ ದಾಸರಹಳ್ಳಿ ಮತ್ತು ಮಹಾಲಕ್ಷ್ಮೀ ಲೇಔಟ್‌ನ ವಿಧಾನಸಭಾ ಕ್ಷೇತ್ರ ಮತ್ತು ಅರಸೀಕೆರೆ ನಗರಸಭೆ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಎಸ್‌ಎಫ್‌ಸಿ ಅನುದಾನದಡಿ ರೂ.60.00ಕೋಟಿಗಳನ್ನು ಈ ಕೆಳಕಂಡಂತೆ ಷರತ್ತಿಗೊಳಪಟ್ಟು ಮಂಜೂರು ಮಾಡಿದೆ.

(ರೂ.ಕೋಟಿಗಳಲ್ಲಿ)

ಕ್ರ. ಸಂ	ಕಾಮಗಾರಿಯ ವಿವರ	ಬಿಡುಗಡೆ ಮಾಡಲಾದ ಅನುದಾನ
1.	ದಾಸರಹಳ್ಳಿ ವಿಧಾನಸಭಾ ಕ್ಷೇತ್ರ ಅಭಿವೃದ್ಧಿ	30.00
2.	ಮಹಾಲಕ್ಷ್ಮೀ ಲೇಔಟ್ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿ ಕಾಮಗಾರಿಗಳಿಗೆ	25.00
3.	ಅರಸೀಕೆರೆ ನಗರಸಭಾ ಅಭಿವೃದ್ಧಿ ಕಾಮಗಾರಿಗಳಿಗೆ	5.00
	ಒಟ್ಟು	60.00

---2.

ಮೇಲ್ಕಂಡ ಪಟ್ಟಿಯಲ್ಲಿ ತಿಳಿಸಿರುವಂತೆ ಮಂಜೂರು ಮಾಡಿರುವ ಅನುದಾನದಲ್ಲಿ ಕೈಗೊಳ್ಳುವ ಕಾಮಗಾರಿಗಳಿಗೆ ಆಯುಕ್ತರು, ಬಿಬಿಎಂಪಿ / ಜಿಲ್ಲಾಧಿಕಾರಿಗಳಿಂದ ಅನುಮೋದನೆ ಪಡೆದು, ಮೇಲೆ ಓದಲಾದ (4)ರ ಅಧಿಸೂಚನೆಯನ್ವಯ ಕಾಮಗಾರಿಗಳನ್ನು ಕರ್ನಾಟಕ ರಸ್ತೆ ಮೂಲಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತದ (ಕೆ.ಆರ್.ಐ.ಡಿ.ಎಲ್) ಮೂಲಕ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶದಲ್ಲಿ ಮಂಜೂರು ಮಾಡಿರುವ ಅನುದಾನದಡಿ ಕೈಗೊಳ್ಳುವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಪ್ರಾರಂಭಿಸಿದ ನಂತರ, ಅನುದಾನ ಬಿಡುಗಡೆಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ಲಲಿತಾಬಾಯಿ.ಕೆ

(ಲಲಿತಾಬಾಯಿ ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ (ಯೋಮೇಕೋ)
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು (ಜಿ & ಎಸ್ಎಸ್ಎ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರ ಕಛೇರಿ (ಜಿ & ಆರ್ಎಸ್ಎ), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲ ಕಛೇರಿ (ಎ & ಇ), ಕರ್ನಾಟಕ, ಬೆಂಗಳೂರು.
4. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು.
5. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
6. ಪೌರಾಯುಕ್ತರು, ಅರಸೀಕೆರೆ ನಗರಸಭೆ, ಹಾಸನ ಜಿಲ್ಲೆ.
7. ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ.
8. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಹಾಸನ ಜಿಲ್ಲೆ.
9. ಸರ್ಕಾರದ ಕಾರ್ಯದರ್ಶಿಗಳು ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.